# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ., ಹುಣಸೂರು.

## ಸಿ.ಸಿ. ಸಂಖ್ಯೆ: 3338/2022

**ಸಾಕ್ಷಿಯನ್ನು ದಿಃ 06.11.2023 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | |
|---|---|---|
| ಹೆಸರು | ಪಾಪೇಗೌಡ | ಸಿ.ಡಬ್ಲ್ಯೂಃ **6** ಪಿ.ಡಬ್ಲ್ಯೂಃ **4** |
| ತಂದೆಯ ಹೆಸರು | ಲೇಟ್ ಮಾಲೇಗೌಡ | |
| ವಯಸ್ಸು | **60** ವರ್ಷ | |
| ಕೆಲಸ | ನಿವೃತ್ತ ಪಿ.ಎಸ್.ಐ | |
| ವಾಸಸ್ಥಳ | ನಂಜನಗೂಡು | |

ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

1. ನಾನು 2014 ರಿಂದ 2019 ರವರೆಗೆ ನಾನು ಹುಣಸೂರು ಪಟ್ಟಣ ಠಾಣೆಯಲ್ಲಿ ಎ.ಎಸ್.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ **28.01.2017** ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಸಂಜೆ 17.45 ರ ಸಮಯ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವಿಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 31/2017 ಕಲಂ 341,504,506,114 ರೆ/ವಿ 34 ಐ.ಪಿ.ಸಿ ರೀತ್ಯಾ ಪ್ರಕರಣ ದಾಖಲಿಸಿ ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯದ ಹಾಗೂ ನನ್ನ ಮೇಲಾಧಿಕಾರಿಗಳಿಗೆ ರವಾನಿಸಿರುತ್ತೇನೆ.

2. ದೂರನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿದ್ದು, ಅದು ಟ್ರು ಕಾಪಿ ಆದ್ದರಿಂದ ಸಾಕ್ಷಿಯ ಸಹಿ ನಿಶಾನೆಗೊಳಪಡಿಸಿಲ್ಲ. ಪ್ರ.ವ.ವರದಿಯನ್ನು ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ.4 ಎಂದು ಸಾಕ್ಷಿಯ ಸಹಿಯನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-7 ರವರಿಗೆ ನೀಡಿರುತ್ತೇನೆ.

ಪಾಟೀಸವಾಲುಃ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಶಿರಿನ ಜಾವೀದ್ ಅನ್ಸಾರಿ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.